ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ನೀಡಲಾದ ಉತ್ತರಗಳು

ಅನುಬಂಧ–1

ಪಶು ವೈದ್ಯಕೀಯ ಕಾಲೇಜು ಮಂಜೂರಾತಿ

7 (208); ಶ್ರೀ ಅಂಗಾರ .ಎಸ್ (ಸುಳ್ಯ)

ಅ) ಸುಳ್ಯ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಪುತ್ತೂರು ತಾಲ್ಲೂಕಿನ ಕೊಯಿಲ ಗ್ರಾಮದ ಕೊಯಿಲಾಕ್ಕೆ ಪಶುವೈದ್ಯಕೀಯ ಕಾಲೇಜು ಮಂಜೂರುಗೊಂಡಿದ್ದರೂ ಸಹ ಈವರೆಗೆ ಪ್ರಾರಂಭಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಯಾವ ಕಾರಣಕ್ಕಾಗಿ ಪ್ರಾರಂಭಿಸಲಾಗಿಲ್ಲ ಹಾಗೂ ಎಂದಿನಿಂದ ಪ್ರಾರಂಭಿಸಲಾಗುವುದು ಮತ್ತು ಯಾವ ಯಾವ ಕೋರ್ಸ್‌ಗಳನ್ನು ಪ್ರಾರಂಬಿಸಲಾಗುವುದು? (ಪೂರ್ಣ ವಿವರ ನೀಡುವುದು)

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು)

ಅ) ಬಂದಿದೆ.

ಆ)

- ಸುಳ್ಯ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಪುತ್ತೂರು ತಾಲ್ಲೂಕಿನ ಕೊಯಿಲಾ ಗ್ರಾಮ ಕೊಯಿಲಾಕ್ಕೆ ಪಶುವೈದ್ಯಕೀಯ ಮಹಾವಿದ್ಯಾಲಯ ಮಂಜೂರಾಗಿರುತ್ತದೆ.
- ಈ ನಿಮಿತ್ತ ಸದರಿ ಮಹಾವಿದ್ಯಾಲಯದ ಸ್ಥಾಪನೆಗೆ ಕುರಿತಂತೆ ವಿಶ್ವವಿದ್ಯಾಲಯದಿಂದ ವಿಶೇಷ ಕರ್ತವ್ಯಾಧಿಕಾರಿಗಳನ್ನು ಈಗಾಗಲೇ ನೇಮಕ ಮಾಡಲಾಗಿದೆ.
- 250 ಎಕರೆ ಜಮೀನನ್ನು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಿಂದ ಇತ್ತೀಚೆಗೆ ಕರ್ನಾಟಕ ಪಶುವೈದ್ಯಕೀಯ, ಪಶು

ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬೀದರಗೆ ಹಸ್ತಾಂತರಗೊಂಡಿರುತ್ತದೆ.

- ಸದರಿ ಮಹಾವಿದ್ಯಾಲಯದ ಕಟ್ಟಡ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳದ ನಿಮಿತ್ತ ಸಂಪೂರ್ಣ ನೀಲಿ ನಕ್ಷೆಯನ್ನು ತಯಾರಿಸಲಾಗಿದ್ದು ಎಲ್ಲಾ ಕಾಮಗಾರಿಗಳನ್ನು ಕರ್ನಾಟಕ ಗೃಹ ಮಂಡಳಿಗೆ ವಹಿಸುವ ಬಗ್ಗೆ ಸರ್ಕಾರವು ದಿನಾಂಕ: 9–1–2015 ರಂದು ಆದೇಶ ಹೊರಡಿಸಿದೆ. ಭಾರತೀಯ ಪಶುವೈದ್ಯಕೀಯ ಪರಿಷತ್ತು ನವದೆಹಲಿಯ ನಿಯಮಾವಳಿಯಂತೆ ಎಲ್ಲಾ ಸೌಲಭ್ಯಗಳನ್ನು ಒದಗಿಸಿದ ನಂತರ ಪ್ರಸ್ತುತ ಜಾಗದಲ್ಲಿ ಪಶುವೈದ್ಯಕೀಯ ಮಹಾವಿದ್ಯಾಲಯದಲ್ಲಿ 5 ವರ್ಷದ ಬಿ.ವಿ.ಎಸ್ಸಿ. ಮತ್ತು ಎ.ಹೆಚ್ ಕೋರ್ಸನ್ನು ಪ್ರಾರಂಭಿಸಲಾಗುವುದು.

ಅಕ್ರಮ ಮನೆಗಳನ್ನು ಸಕ್ರಮಗೊಳಿಸುವುದು

8 (144); ಶ್ರೀ ಅನಿಲ್ ಲಾಡ್ (ಬಳ್ಳಾರಿ ನಗರ)

ಅ) ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಅಕ್ರಮವಾಗಿ ನಿರ್ಮಿಸಿರುವ ಮನೆಗಳನ್ನು ಸಕ್ರಮಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಅಕ್ರಮ ಮನೆಗಳನ್ನು ಸಕ್ರಮಗೊಳಿಸಲು ಸರ್ಕಾರ ರೂಪಿಸಿರುವ ನಿಯಮಗಳೇನು? (ಪೂರ್ಣ ಮಾಹಿತಿ ನೀಡುವುದು)

ಶ್ರೀ ವಿನಯಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು)

ಅ) ಹೌದು. ಬಳ್ಳಾರಿ ನಗರವಲ್ಲದೆ ರಾಜ್ಯಾದ್ಯಂತ ಅಕ್ರಮವಾಗಿ ನಿರ್ಮಿಸಿರುವ ಮನೆಗಳನ್ನು ಸಕ್ರಮಗೊಳಿಸುವ ನಿಯಮಗಳನ್ನು ರೂಪಿಸಲಾಗಿದೆ.

ಆ) ಸರ್ಕಾರವು ತನ್ನ ಅಧಿಸೂಚನೆ ಸಂಖ್ಯೆ: ನಅಇ 556 ಮೈಅಪ್ರಾ 2013(1) ಬೆಂಗಳೂರು ದಿನಾಂಕ 28–05–2014 ರಲ್ಲಿ ಅಕ್ರಮವಾಗಿ ನಿರ್ಮಿಸಿರುವ ಮನೆಗಳನ್ನು ಸಕ್ರಮಗೊಳಿಸುವ ನಿಯಮಗಳನ್ನು